**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:-**

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಶಾಲಾ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ನೂರಾರು ಬೋಧಕ ಬೋಧಕೇತರ ಸಿಬ್ಬಂದಿಯವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇವರು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡುವಲ್ಲಿ ತುಂಬಾ ಶ್ರಮವಹಿಸಿ ಕೆಲಸ ಮಾಡುತ್ತಿದ್ದಾರೆ. ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಇವರು ಈಗಾಗಲೇ ವಯೋಮಿತಿ ಮೀರಿದ್ದು ಬೇರೆಲ್ಲು ಸರ್ಕಾರಿ ನೌಕರಿಗೆ ಸೇರಲು ಸಾದ್ಯವಾಗುವುದಿಲ್ಲ. ಈ ಶಿಕ್ಷಕರಿಗೆ ಕನಿಷ್ಟ ಎರಡು ವರ್ಷಗಳಿಗೊಮ್ಮೆ ವೇತನ ಪರಿಷ್ಕರಣೆಯನ್ನು ಮಾಡಬೇಕು. ಆದರೆ ಇವರಿಗೆ ಕಳದೆ 9 ವರ್ಷಗಳಿಂದ ವೇತನವನ್ನು ಪರಿಷ್ಕರಣೆ ಮಾಡದೆ ಕನಿಷ್ಟ ವೇತನದಲ್ಲೇ ಕರ್ತವ್ಯ ನಿರ್ವಹಿಸುತ್ತಿದ್ದು ತುಂಬಾ ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ಇವರಿಗೆ ಕೂಡಲೇ ವೇತನ ಪರಿಷ್ಕರಣೆ ಮಾಡಿ ಜಿ.ಬಿ.ಎ ವತಿಯಿಂದಲೇ ನೇರವಾಗಿ ವೇತನ ನೀಡಬೇಕೆಂಬ ವಿಷಯದ ಕುರಿತು.**

ಉತ್ತರ:

ಪಾಲಿಕೆಯ ಶಾಲಾ / ಕಾಲೇಜುಗಳಲ್ಲಿ 2023-24ನೇ ಸಾಲಿನವರೆಗೆ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರು / ಉಪನ್ಯಾಸಕರುಗಳಿಗೆ 2024-25ನೇ ಸಾಲಿನಲ್ಲಿ ಹೊರಗುತ್ತಿಗೆ ಪದ್ಧತಿ ರದ್ದುಪಡಿಸಲಾಗಿದೆ. ಸದರಿ ಶಿಕ್ಷಕರು / ಉಪನ್ಯಾಸಕರುಗಳನ್ನು 2024-25ನೇ ಸಾಲಿಗೆ ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ನಿಯಾಮವಳಿಗಳಂತೆ ಎಸ್.ಡಿ.ಎಂ.ಸಿ ಹಾಗೂ ಸಿ.ಡಿ.ಸಿ ರಚಿಸಿ ಇದರ ಮುಖಾಂತರ ಅತಿಥಿ ಶಿಕ್ಷಕರು / ಉಪನ್ಯಾಸಕರುಗಳನ್ನಾಗಿ ನಿಯೋಜಿಸಿಕೊಳ್ಳಲಾಗಿರುತ್ತದೆ.

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಸ್.ಡಿ.ಎಂ.ಸಿ ಹಾಗೂ ಸಿ.ಡಿ.ಸಿ ನಿರ್ದೇಶನಗಳಂತೆ ಆಯ್ಕೆಯಾಗಿರುವುದರಿಂದ, ಶಿಕ್ಷಣ ಇಲಾಖೆಯ ನಿರ್ದೇಶನದಂತೆ ಗೌರವಧನವನ್ನು ಪಾವತಿಸಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 170 ಬಿಬಿಎಸ್ 2025, ದಿನಾಂಕ: 02-09-2025 ರಂತೆ 05 ನಗರ ಪಾಲಿಕೆಗಳಾಗಿ ವಿಭಜನೆ ಮಾಡಿರುವ ಹಿನ್ನೆಲೆಯಲ್ಲಿ, ಶಿಕ್ಷಣ ವಿಭಾಗದ ಶಾಲಾ / ಕಾಲೇಜುಗಳನ್ನು ನಗರ ಪಾಲಿಕೆಗಳಿಗೆ ವಿಂಗಡಣೆ ಮಾಡಿರುವುದರಿಂದ, ಈಗಾಗಲೇ ಆಯಾ ನಗರ ಪಾಲಿಕೆಯ ಆಯುಕ್ತರುಗಳು ಗೌರವಧನ ಪಾವತಿಸುತ್ತಿರುತ್ತಾರೆ. ಆದ್ದರಿಂದ, ಜಿ.ಬಿ.ಎ ವತಿಯಿಂದ ಪಾವತಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ: ನಅಇ 36 ಎಂಎನ್‌ಯು 2026

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿ**